ವರ್ಷಗಳಿಂದ ಮೂರು ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡುವುದಕ್ಕಾಗಿಲ್ಲ. ಹಾಸನದ ಕೃಷಿ ಕಾಲೇಜಿಗೆ ಲೆಕ್ಚರರ್‌ಗಳನ್ನು ನೇಮಕ ಮಾಡಬೇಕು ಮತ್ತು ಆ ಕಾಲೇಜಿಗೆ ಮೂರು ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಬೇಕೆಂದು ತಮ್ಮ ಮೂಲಕ ಕೇಳುತ್ತೇನೆ.

ಶ್ರೀ ಉಮೇಶ್ ವಿ. ಕತ್ತಿ:– ರೇವಣ್ಣನವರು ಕೇಳಿದ ಪ್ರಶ್ನೆಗೆ ನಾನು ಈಗಾಗಲೇ ಸವಿಸ್ತಾರವಾದ ಮಾಹಿತಿಯನ್ನು ಕೊಟ್ಟಿದ್ದೇನೆ. ಖಾಲಿಯಿರುವ ಹುದ್ದೆಗಳನ್ನು ತುಂಬಬೇಕೆಂದು ವಿಶ್ವವಿದ್ಯಾಲಯದವರು ಈಗಾಗಲೇ ಮನವಿ ಮಾಡಿದ್ದಾರೆ. ಕೆಲವು ಹುದ್ದೆಗಳನ್ನು ತುಂಬಲು ಈಗಾಗಲೇ ಪರ್ಮಿಷನ್‌ಅನ್ನು ಕೊಟ್ಟಿದ್ದೇವೆ. ಹಂತಹಂತವಾಗಿ, ಆದಷ್ಟು ಬೇಗನೆ ಮಾಡುತ್ತೇವೆ.

ಶ್ರೀ ಹೆಚ್.ಡಿ. ರೇವಣ್ಣ:– ದಯಮಾಡಿ ಆದಷ್ಟು ಬೇಗನೆ ಎಲ್ಲಾ ಹುದ್ದೆಗಳನ್ನು ತುಂಬಬೇಕು. ಏಕೆಂದರೆ, ಬಡವರ ಮಕ್ಕಳು ಓದುತ್ತಿರುವ ಕಾಲೇಜುಗಳಿವು. ಸಾಹುಕಾರರ ಮಕ್ಕಳ್ಯಾರೂ ಇಲ್ಲಿ ಬಂದು ಓದುವುದಿಲ್ಲ.

ಶ್ರೀ ಉಮೇಶ್ ವಿ. ಕತ್ತಿ:– ವಿಶೇಷವಾಗಿ ಹಾಸನ ಜಿಲ್ಲೆಗೆ ಆದಷ್ಟು ಬೇಗನೆ ಮಾಡುತ್ತೇವೆ.

10. ವಿಷಯ:– ಮಲೆನಾಡು ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲರಾಗಿ ಕಾರ್ಯನಿರ್ವಹಿಸುತ್ತಿರುವವರಿಗೆ ವೇತನ ಸಂರಕ್ಷಣೆ ಮಾಡದಿರುವ ಬಗ್ಗೆ.

ಶ್ರೀ ಹೆಚ್.ಡಿ. ರೇವಣ್ಣ (ಹೊಳೆನರಸೀಪುರ):– ಮಲೆನಾಡು ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲರಾಗಿ ಕಾರ್ಯನಿರ್ವಹಿಸುತ್ತಿರುವವರಿಗೆ ವೇತನ ಸಂರಕ್ಷಣೆ ಮಾಡದೆ ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ವ್ಯತಿರಿಕ್ತವಾಗಿ ತಾರತಮ್ಯ ಮಾಡಿರುವ ಬಗ್ಗೆ ಉನ್ನತ ಶಿಕ್ಷಣ ಸಚಿವರ ಗಮನವನ್ನು ಸೆಳೆಯುತ್ತೇನೆ.

ಶ್ರೀ ಸಿ.ಟಿ. ರವಿ (ಉನ್ನತ ಶಿಕ್ಷಣ ಸಚಿವರು):– ಮಾನ್ಯ ಅಧ್ಯಕ್ಷರೆ,

ಕರ್ನಾಟಕ ಸರ್ಕಾರದ ಅನುದಾನಿತ ಸಂಸ್ಥೆಯಿಂದ ಮಲೆನಾಡು ಇಂಜಿನಿಯರಿಂಗ್ ಕಾಲೇಜಿನಲ್ಲಿ ಪ್ರಾಧ್ಯಾಪಕರಾಗಿ, ಸಹಾಯಕ ಪ್ರಾಧ್ಯಾಪಕರಾಗಿ ಹಾಗೂ ಉಪನ್ಯಾಸಕರಾಗಿ ಕಾರ್ಯನಿರ್ವಹಿಸಿದ ಕೆಲವು ಬೋಧಕವರ್ಗದವರು 2010ನೇ ಸಾಲಿನಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಬೋಧಕ ವೃಂದಕ್ಕೆ ಆಯ್ಕೆಗೊಂಡು ಕಾರ್ಯನಿರ್ವಹಿಸುತ್ತಿದ್ದಾರೆ.

ಸದರಿ ಉಪನ್ಯಾಸಕರು ತಮ್ಮ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸಲ್ಲಿಸಿದ ಸೇವೆಯನ್ನು ಪಿಂಚಣಿ ಸೌಲಭ್ಯಕ್ಕೆ ಪರಿಗಣಿಸಬೇಕೆಂದು ಕೋರಿ ಸಲ್ಲಿಸಿದ ಮನವಿಗಳನ್ನು ಪರಿಶೀಲಿಸಿ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 01 ಎಸ್‌ಆರ್‌ಎ 2011 ದಿನಾಂಕ:05–03–2011ರಂತೆ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸಲ್ಲಿಸಿದ ಪಿಂಚಣಿಯುಕ್ತ ಸೇವೆಯನ್ನು ಅರ್ಹತಾದಾಯಕ ಸೇವೆಯೆಂದು ಪರಿಗಣಿಸಲು ಅವಕಾಶವಿಲ್ಲವೆಂದು ಈಗಾಗಲೇ ತಿಳಿಸಲಾಗಿದೆ.

ದಿನಾಂಕ: 01–04–2006ರ ನಂತರ ಸರ್ಕಾರಿ ಸೇವೆಗೆ ಸೇರಿದವರು ಹೊಸ ಅಂಶದಾಯಕ ಕೊಡುಗೆ ವಿಶ್ರಾಂತಿ ವೇತನ ಯೋಜನೆಯ ವ್ಯಾಪ್ತಿಗೆ ಒಳಪಡಲಿದ್ದು (contributory Pension Scheme) ಕರ್ನಾಟಕ ನಾಗರೀಕ ಸೇವಾ ನಿಯಮಗಳಡಿ ಪಿಂಚಣಿ ಸೌಲಭ್ಯಕ್ಕೆ ಅರ್ಹರಿಲ್ಲದ ಕಾರಣ, ಈ ಹಿಂದೆ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸಲ್ಲಿಸಿದ ಸೇವೆಯನ್ನು ಪ್ರಸ್ತುತ ನಿಯಮಾವಳಿಯಂತೆ ಪಿಂಚಣಿ ಸೌಲಭ್ಯಗಳಿಗೆ ಪರಿಗಣಿಸಲು ಸಾಧ್ಯವಿಲ್ಲ.

ಅನುದಾನಿತ ಶಿಕ್ಷಣ ಸಂಸ್ಥೆಗಳಿಂದ ಸೇವೆ ಸಲ್ಲಿಸಿ ಸರ್ಕಾರಿ ಸೇವೆಗೆ ಆಯ್ಕೆಯಾಗಿರುವವರಿಗೆ ಹಿಂದಿನ ಸೇವೆಯನ್ನು ಪರಿಗಣಿಸುವ ಕುರಿತು ಸರ್ವೋಚ್ಚ ನ್ಯಾಯಾಲಯದ ತೀರ್ಪಿಗೆ ವ್ಯತಿರಿಕ್ತವಾಗಿದೆ ಎಂದು ತಿಳಿಸಿರುವ ಅಂಶಗಳ ಬಗ್ಗೆ ಹಾಗೂ ನಿಯಮಗಳಿಗೆ ಸೂಕ್ತ ತಿದ್ದುಪಡಿ ತರುವ ಬಗ್ಗೆ ಮತ್ತು ಆಗಿರುವ ಅನ್ಯಾಯವನ್ನು ಸರಿಪಡಿಸುವ ಕುರಿತು ಈ ಬಗ್ಗೆ ನ್ಯಾಯಾಲಯದ ತೀರ್ಪುಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಶ್ರೀ ಹೆಚ್.ಎಸ್. ಪ್ರಕಾಶ್:– ಮಾನ್ಯ ಅಧ್ಯಕ್ಷರೆ, ಇಲ್ಲಿ ಏನಾಗಿದೆ ಎಂದರೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭವಾದ ಮೇಲೆ ಲೋಕಸೇವಾ ಆಯೋಗದಿಂದ ಅಲ್ಲಿಗೆ ಪ್ರಿನ್ಸಿಪಾಲ್ ಮತ್ತು ಲೆಕ್ಚರರ್‌ಗಳನ್ನು ತುಂಬಿದ್ದಾರೆ. ಸುಮಾರು 20–22 ವರ್ಷ ಅನುಭವವಾಗಿರ ತಕ್ಕಂಥವರು, ಬೇರೆ ಬೇರೆ ಅನುದಾನಿತ ಕಾಲೇಜುಗಳಲ್ಲಿ ಕೆಲಸ ಮಾಡುತ್ತಿದ್ದಂಥವರು ಇಲ್ಲಿಗೆ ಪ್ರಿನ್ಸಿಪಾಲ್ ಆಗಿ, ಲೆಕ್ಚರರ್ ಆಗಿ ನೇಮಕವಾಗಿದ್ದಾರೆ. ಹಿಂದೆ ಇದ್ದ ಕಾಲೇಜುಗಳಲ್ಲಿ ಅವರಿಗೆ ಒಂದು ಲಕ್ಷ ರೂಪಾಯಿ ಸಂಬಳ ಬರುತ್ತಿತ್ತು. ಆದರೆ ಇಲ್ಲಿ ಈಗ 75 ಸಾವಿರ ರೂಪಾಯಿ ಸಂಬಳ ಬರುತ್ತಿದೆ. ಅವರು ನಿವೃತ್ತರಾದ ನಂತರ ಸರ್ಕಾರದಿಂದ ಬರುವಂಥ ಪೆನ್‌ಷನ್ ಸೌಲಭ್ಯದಿಂದ ವಂಚಿತರಾಗಿದ್ದಾರೆ. ಹಿಂದೆ ಅವರು ಅನುದಾನಿತ ಕಾಲೇಜುಗಳಲ್ಲಿ ಕೆಲಸ ಮಾಡುತ್ತಿದ್ದುದನ್ನೂ ಪರಿಗಣಿಸಿ, ಅವರು ನಿವೃತ್ತರಾದ ನಂತರ ಅವರಿಗೆ ಬರುವಂಥ ಎಲ್ಲಾ ಸೌಲಭ್ಯಗಳನ್ನೂ ಕೊಡಲಿ ಎಂದು ಕೇಳುತ್ತಿದ್ದೇವೆ.

ಶ್ರೀ ಸಿ.ಟಿ. ರವಿ: ದಿನಾಂಕ: 01-04-2006ರ ನಂತರ ಸರ್ಕಾರಿ ಸೇವೆಗೆ ಸೇರಿದವರು ಹೊಸ ಅಂಶದಾಯಿಕ ಕೊಡುಗೆ ವಿಶ್ರಾಂತಿ ಯೋಜನೆ (Contributory Pension Scheme) ವ್ಯಾಪ್ತಿಗೆ ಒಳಪಡಲಿದ್ದು, ಕರ್ನಾಟಕ ನಾಗರಿಕ ಸೇವಾ ನಿಯಮಗಳಡಿ ಪಿಂಚಣಿ ಸೌಲಭ್ಯಕ್ಕೆ ಅರ್ಹರಿಲ್ಲದ ಕಾರಣ ಈ ಹಿಂದೆ, ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಸಲ್ಲಿಸಿದ ಸೇವೆಯನ್ನು ಈಗಿರುವ ನಿಯಮಾವಳಿಗಳಂತೆ ಪಿಂಚಣಿ ಸೌಲಭ್ಯಗಳಿಗೆ ಪರಿಗಣಿಸಲು ಅವಕಾಶವಿಲ್ಲ. ಆದರೆ ಇದು ಸರ್ವೋಚ್ಚ ನ್ಯಾಯಾಲಯದ ತೀರ್ಪಿಗೆ ವ್ಯತಿರಿಕ್ತವಾಗಿದೆ ಎಂದು ತಾವು ಹೇಳಿದ್ದೀರಿ. ನಿಯಮಾವಳಿಗೆ ಸೂಕ್ತ ತಿದ್ದುಪಡಿ ತರುವುದು ಮತ್ತು ಅನ್ಯಾಯವನ್ನು ಸರಿಪಡಿಸುವ ಬಗ್ಗೆ, ನ್ಯಾಯಾಲಯದ ತೀರ್ಪನ್ನು ಪರಿಶೀಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುತ್ತೇವೆ.

ಅಧ್ಯಕ್ಷರು:- ಜಡ್ಜ್‌ಮೆಂಟ್ ಪರಿಶೀಲನೆ ಮಾಡಿ ಕ್ರಮ ಕೈಗೊಳ್ಳುತ್ತೇನೆ ಎಂದು ಹೇಳಿದ್ದಾರೆ, ನೀವು ಮತ್ತೆ ಮತ್ತೆ ಕೇಳಬೇಡಿ.

11. ವಿಷಯ: ಹಿಂದುಳಿದ ವರ್ಗಗಳ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿ ಸೌಲಭ್ಯವನ್ನು ಮುಂದುವರೆಸುವ ಬಗ್ಗೆ.

ಶ್ರೀ ಟಿ.ಬಿ. ಜಯಚಂದ್ರ (ಶಿರಾ):- ಮಾನ್ಯ ಅಧ್ಯಕ್ಷರೆ, ಹಿಂದುಳಿದ ವರ್ಗಗಳ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ಆದಾಯ ಮಿತಿಯಿಂದ ಸೌಲಭ್ಯವನ್ನು ಮುಂದುವರೆಸುವ ಬಗ್ಗೆ ಸಮಾಜ ಕಲ್ಯಾಣ ಸಚಿವರ ಗಮನವನ್ನು ಸೆಳೆಯುತ್ತೇನೆ.

ಶ್ರೀ ಎ. ನಾರಾಯಣಸ್ವಾಮಿ(ಸಮಾಜ ಕಲ್ಯಾಣ ಸಚಿವರು):- ಮಾನ್ಯ ಅಧ್ಯಕ್ಷರೆ,

ಶುಲ್ಕ ಮರುಪಾವತಿಗಾಗಿ ಹಿಂದುಳಿದ ವರ್ಗಗಳ ಪ್ರವರ್ಗ-1ಕ್ಕೆ ಸೇರಿದ ಕುಟುಂಬದ ವಾರ್ಷಿಕ ವರಮಾನವನ್ನು ಈ ಹಿಂದೆ ನಿಗಧಿಪಡಿಸಿರಲಿಲ್ಲ. ಆದರೆ ಪ್ರವರ್ಗ-1ರಲ್ಲಿ ಹೆಚ್ಚಿನ ವರಮಾನ ಹೊಂದಿದವರು ಈ ಸವಲತ್ತುಗಳನ್ನು ತೆಗೆದುಕೊಳ್ಳುತ್ತಿದ್ದು, ಅದೇ ವರ್ಗದ ಕಡು ಬಡವರಿಗೆ ಈ ಸವಲತ್ತು ದೊರಕುತ್ತಿಲ್ಲ. ಸರ್ಕಾರದ ಉದ್ದೇಶ ಯಾವುದೇ ವರ್ಗದಲ್ಲಿ ಅತೀ ಕಡಿಮೆ ಆದಾಯವಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಸವಲತ್ತುಗಳನ್ನು ಆದ್ಯತೆ ಮೇಲೆ ನೀಡಬೇಕಾಗಿದೆ. ಆದ್ದರಿಂದ ಇತ್ತೀಚಿನ ಸರ್ಕಾರಿ ಆದೇಶದಲ್ಲಿ ಆದಾಯ ಮಿತಿಯನ್ನು ಪ್ರವರ್ಗ-1ಕ್ಕೆ ಸಹ ರೂ.1 ಲಕ್ಷಕ್ಕೆ ವಾರ್ಷಿಕ ಆದಾಯ ಮೀರದಂತೆ ನಿಗಧಿಪಡಿಸಲಾಗಿದೆ. ಉಳಿದ ಹಿಂದುಳಿದ ವರ್ಗಗಳಾದ ಪ್ರವರ್ಗ-2ಎ, 3ಎ ಮತ್ತು 3ಬಿ